ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ವೈನ್‌ಶಾಪ್/ಪಬ್‌ಗಳನ್ನು ತೆರೆಯಲು ಇರುವ ಮಾನದಂಡ ಕುರಿತು

ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್(ವಿಧಾನ ಸಭೆಯಿಂದ ಚುನಾಯಿತರಾದವರು ) –

517 (547) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಶಿಕ್ಷಣ ಸಂಸ್ಥೆಗಳ ಸುತ್ತಮುತ್ತ ವೈನ್ ಶಾಪ್ ಮತ್ತು ಪಬ್‌ಗಳನ್ನು ತೆರೆಯಲು ಯಾವ ಮಾನದಂಡಗಳನ್ನು ಅನುಸರಿಸಿ ಅನುಮತಿ ನೀಡಲಾಗುತ್ತಿದೆ; ಈ ಮಾನದಂಡಗಳನ್ನು ಅನುಸರಿಸಲು ಯಾವ ವೈಜ್ಞಾನಿಕ ಕಾರಣಗಳನ್ನು ಅನುಸರಿಸಲಾಗಿದೆ;

(ಆ) ಇತ್ತೀಚಿನ ದಿನಗಳಲ್ಲಿ ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ವ್ಯಾಪಕವಾಗಿ ಚರ್ಚಿಸಲ್ಪಟ್ಟಂತೆ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳನ್ನು ಕೇಂದ್ರವಾಗಿಸಿ ಮಾಧಕದ್ರವ್ಯ ಜಾಲ ತನ್ನ ಚಟುವಟಿಕೆಯನ್ನು ವಿಸ್ತರಿಸುತ್ತಿರುವುದು ನಿಜವೇ;

(ಇ) ಈ ಹಿನ್ನೆಲೆಯಲ್ಲಿ ಶಾಲಾ ಕಾಲೇಜುಗಳ ಸುತ್ತಮುತ್ತ ಈ ರೀತಿಯ ಚಟುವಟಿಕೆಗಳಿಗೆ ಆಸ್ಪದಕೊಡದಂತೆ ಸರ್ಕಾರ ಹೊಸ ಮಾನದಂಡಗಳನ್ನು ಸಿದ್ಧಪಡಿಸಿ, ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು ಮಾದಕದ್ರವ್ಯ ಜಾಲವನ್ನು ಮಟ್ಟಹಾಕಲು ಮುಂದಾಗುವುದೇ?